ಸಿವಿಲ್ ಮತ್ತು ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ,

ಹಗರಿಬೊಮ್ಮನಹಳ್ಳಿ

ಸಿ ಸಿ ನಂ. 424/2022

ಸಾಕ್ಷಿಗೆ ದಿನಾಂಕ 24-01-2026 ರಂದು ಪ್ರಮಾಣ ವಚನ ಭೋದಿಸಲಾಯಿತು.

C.W.: 6 P.W.: 7

| | | |
|---|---|---|
| ಹೆಸರು | ಃ | ಓಲೇಕಾರ ನಾಗಪ್ಪ |
| ತಂದೆಯ ಹೆಸರು | ಃ | ಫಕೀರಪ್ಪ |
| ವಯಸ್ಸು | ಃ | 61 ವರ್ಷ |
| ಉದ್ಯೋಗ | ಃ | ವ್ಯವಸಾಯ |
| ವಾಸ ಸ್ಥಳ | ಃ | ನೆಲ್ಲುಕುದರೆ-2 ಗ್ರಾಮ |

ಮುಖ್ಯ ವಿಚಾರಣೆ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-

ಆರೋಪಿತರು ನಮ್ಮ ಜನಾಂಗದವರು ಇರುತ್ತಾರೆ. ಚಾಸಾ-1, 4, 5 ರವರು ನನ್ನ ಸಂಬಂಧಿಕರು, ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ, ನಾನು ಪೋಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ. ನಾನು ಯಾವುದೇ ಗಲಾಟೆ ನೋಡಿಲ್ಲ ಮತ್ತು ಬಿಡಿಸಿಲ್ಲ.

(ಸಹಾಯಕ ಸರ್ಕಾರಿ ಅಭಿಯೋಜಕರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ನೀಡಲು ಕೇಳಿಕೊಂಡಿದ್ದು ಅನುಮತಿ ನೀಡಲಾಯಿತು.)

ಪಾಟೀ ಸವಾಲುಃ ಸ. ಸ. ಅಭಿಯೋಜಕರವರಿಂದಃ-

ದಿಃ31-03-2022 ರಂದು ಬೆಳಿಗ್ಗೆ 10 ಗಂಟೆ ಸುಮಾರಿಗೆ ನಾನು ನನ್ನ ದ್ವಿಚಕ್ರ ವಾಹನದಲ್ಲಿ ಹೆಚ್ ಬಿ ಹಳ್ಳಿಗೆ ಹೋಗುತ್ತಿರುವಾಗ ಆರೋಪಿತರು ಚಾಸಾ-1 ಮತ್ತು 4 ರವರ ಜೊತೆ ಗಲಾಟೆ ಮಾಡುತ್ತಿದ್ದರು ಅವರಿಗೆ ಅವಾಚ್ಯ ಶಬ್ದದಿಂದ ಬೈಯುತ್ತಿದ್ದರು ಮತ್ತು ಕಟ್ಟಿಗೆಯಿಂದ ಹಲ್ಲೆ ಮಾಡುತ್ತಿದರು, ನಾನು, ಚಾಸಾ-3 ಮತ್ತು 5 ರವರು ಸೇರಿ ಗಲಾಟೆಯನ್ನು ಬಿಡಿಸಿರುತ್ತೇವೆಂದರೆ ಸರಿಯಲ್ಲ. ಘಟನೆಯ ಕುರಿತು ಚಾಸಾ-1 ರವರು ಪೋಲೀಸ್ ಠಾಣೆಯಲಿಲ ದೂರು ನೀಡಿರುತ್ತಾರೆಂದರೆ ಸರಿಯಲ್ಲ. ಘಟನೆಯ ಕುರಿತು ನಾನು ದಿಃ03-04-2022 ರಂದು ತನಿಖಾಧಿಕಾರಿಗಳ ಮುಂದೆ ಹೇಳಿಕೆ ನೀಡಿರುತ್ತೇನೆಂದರೆ ಸರಿಯಲ್ಲ. ಸದರಿ ಅಲ್ಲಗಳೆದ ಹೇಳಿಕೆಯನ್ನು ನಿಪಿ-9 ಎಂದು ಗುರುತಿಸಲಾಯಿತು. ಆರೋಪಿತರು, ಚಾಸಾ-1 ಹಾಗೂ 4 ರವರು

ಪ್ರಕರಣವನ್ನು ರಾಜೀ ಮಾಡಿಕೊಂಡಿದ್ದಾರೆಂದರೆ ಸರಿ. ಆ ಕಾರಣದಿಂದಾಗಿ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ಮು ಮಾ-1 ರಿಂದ ಆರೋಪಿತರು ಚಾಸಾ-1, 4 ರವರ ಮೇಲೆ ಹಲ್ಲೆ ಮಾಡಿದ್ದರೂ ಸಹಾ ನಾನು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು. ಆರೋಪಿ ಪರ ವಕೀಲರಿಂದಃ- ಇಲ್ಲ

ಮರು ವಿಚಾರಣೆ ಇಲ್ಲಃ

(ಮುಕ್ತ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ,

ಸಿವಿಲ್ ಮತ್ತು ಜೆ ಎಂ ಎಫ್ ಸಿ.,
ಹಗರಿಬೊಮ್ಮನಹಳ್ಳಿ